# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 17-04-2018**

**ಪ್ರಕಟಣೆಯ ಕೃಪೆಗಾಗಿ.............**

**ವಿಜಯಪುರ:** ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಹಿಳೆಯರ ಪಾತ್ರ ಅತೀ ಮುಖ್ಯ. ಅದನ್ನು ಎಲ್ಲ ಮಹಿಳೆಯರು ಅರ್ಥಮಾಡಿಕೊಳ್ಳಬೇಕಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸುಂದರೇಶ ಬಾಬು ಅಭಿಪ್ರಾಯಪಟ್ಟರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ ಮತ್ತು ಶಿಕ್ಷಣ ಅಧ್ಯಯನ ವಿಭಾಗ ಹಾಗೂ ವಿದ್ಯಾರ್ಥಿನಿಯರ ಒಕ್ಕೂಟ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮತದಾರರ ಜಾಗೃತಿ ಮತ್ತು ಮತದಾನ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜವನ್ನು ಅಭಿವೃದ್ಧಿ ಪಡಿಸುವಲ್ಲಿ ಮಹಿಳೆಯರ ಪಾಲುದಾರಿಕೆಯು ಹೆಚ್ಚಿದೆ. ಇದರ ಜೊತೆಗೆ ಮತದಾನ ಮಾಡುವುದು ಅಷ್ಟೇ ಮುಖ್ಯ, ಜಾಗೃತಿಯ ಮತದಿಂದ ದೇಶದ ಭವಿಷ್ಯವನ್ನು ರೂಪಿಸುವಲ್ಲಿ ಯುವಜನತೆ ಯೋಚಿಸಬೇಕು. ದೇಶಕ್ಕೆ ಏನನ್ನು ಮಾಡಬೇಕು ಎನ್ನುವ ಮೊದಲು ಸಕಾರಾತ್ಮಕ ಸಮಾಜವನ್ನು ಸೃಷ್ಟಿಸುವಲ್ಲಿ ಯಾವ ವ್ಯಕ್ತಿ ಅರ್ಹರು ಎನ್ನುವದು ತಿಳಿದುಕೊಳ್ಳುವುದು ಅವಶ್ಯಕ ಎಂದು ತಿಳಿಸಿದರು.

ಇಂದಿನ ದಿನಗಳಲ್ಲಿ ಮತದಾನವನ್ನು ಮನರಂಜನೆಯಾಗಿ ಮಾರ್ಪಡಿಸಿದ್ದು ವಿಷಾದನೀಯ. ವಿದ್ಯಾವಂತ ಯುವಕರೆ ಇಂತಹ ಸನ್ನಿವೇಷವನ್ನು ಸೃಷ್ಟಿಸುತ್ತಿದ್ದಾರೆ. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಮತದಾನದ ಕುರಿತು ಆಳವಾದ ಅಧ್ಯಯನ ಮಾಡಿ ಅದರ ಬಗ್ಗೆ ಅನಕ್ಷರಸ್ಥರಲ್ಲಿಯೂ ಅರಿವು ಮೂಡಿಸಬೇಕು ಎಂದು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು.

ಪ್ರತಿಯೊಬ್ಬ ವ್ಯಕ್ತಿ ಮತದಾನದ ಕುರಿತು ಚರ್ಚಿಸಿ ಸಮಾಜಕ್ಕೆ ಪ್ರತಿಭಾವಂತ ಪ್ರತಿನಿಧಿಯನ್ನು ಆಯ್ಕೆ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ಕಾರ್ಯಕ್ರಮದ ಇನ್ನೋರ್ವ ಅತಿಥಿಯಾದ ಸೋಮಲಿಂಗ ಗೆನ್ನೂರ ಮಾತನಾಡಿ, ಮತದಾನ ಎನ್ನುವುದು ಮನೆಯ ಮಗಳು ಇದ್ದಂತೆ. ಅದನ್ನು ಮಾರಿಕೊಳ್ಳುವುದು ಬೇಡ. ಅದೇ ರೀತಿ ಪ್ರತಿಯೊಬ್ಬ ವಿದ್ಯಾರ್ಥಿನಿಯೂ ಮತ ಚಲಾಯಿಸಿ ದೇಶವನ್ನು ಸದೃಢವಾಗಿಸಲು ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಸಿ.ಬಿ. ಕುಂಬಾರ ಅವರು ಮತದಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಮತ್ತು ಮತದಾನದ ಪ್ರಕ್ರಿಯೆಯನ್ನು ಸ್ವೀಪ್ ಮೂಲಕ ವಿದ್ಯಾರ್ಥಿನಿಯರಿಗೆ ತೋರಿಸಿದರು.

ಮಹಿಳಾ ವಿವಿ ಕುಲಸಚಿವ ಪ್ರೊ.ಎಲ್.ಆರ್. ನಾಯಕ, ಜಿಲ್ಲಾ ಸ್ವೀಪ್ ಸಮಿತಿ ಸದಸ್ಯರು, ವಿವಿಧ ನಿಖಾಯಗಳ ಡೀನರು, ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಸಂಗೀತ ವಿಭಾಗದ ವಿದ್ಯಾರ್ಥಿನಿಯರು ಮಹಿಳಾ ಗೀತೆ ಹಾಡಿದರು. ಶಿಕ್ಷಣ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ವಿ.ವಿ.ಮಳಗಿ ಸ್ವಾಗತಿಸಿ, ಪರಿಚಯಿಸಿದರು. ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯದ ನಿರ್ದೇಶಕ ಪ್ರೊ.ಓಂಕಾರ ಕಾಕಡೆ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯದ ಸಹಾಯಕ ನಿರ್ದೇಶಕ ಡಾ.ಹನುಮಂತಯ್ಯ ಪೂಜಾರಿ ನಿರೂಪಿಸಿದರು. ವಿದ್ಯಾರ್ಥಿ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಪೂಜಾ ಬಾಗಿ ವಂದಿಸಿದರು.

**ಫೋಟೋ ಕ್ಯಾಪ್ಷನ್:**

1) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ ಮತ್ತು ಶಿಕ್ಷಣ ಅಧ್ಯಯನ ವಿಭಾಗ ಹಾಗೂ ವಿದ್ಯಾರ್ಥಿನಿಯರ ಒಕ್ಕೂಟ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮತದಾರರ ಜಾಗೃತಿ ಮತ್ತು ಮತದಾನ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸುಂದರೇಶ ಬಾಬು ಮಾತನಾಡಿದರು.**

2) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ ಮತ್ತು ಶಿಕ್ಷಣ ಅಧ್ಯಯನ ವಿಭಾಗ ಹಾಗೂ ವಿದ್ಯಾರ್ಥಿನಿಯರ ಒಕ್ಕೂಟ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮತದಾರರ ಜಾಗೃತಿ ಮತ್ತು ಮತದಾನ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಮತದಾನದ ಪ್ರಕ್ರಿಯೆಯನ್ನು ಸ್ವೀಪ್ ಮೂಲಕ ವಿದ್ಯಾರ್ಥಿನಿಯರಿಗೆ ತೋರಿಸಿದರು.**


ಮತದಾರರ ಜಾಗೃತಿ ಮತ್ತು ಮತದಾನ ಪ್ರಾತ್ಯಕ್ಷಿಕೆ
ಮುಖ್ಯ ಅತಿಥಿಗಳು:
ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
ಜಿಲ್ಲಾ ಪಂಚಾಯತ್, ವಿಜಯಪುರ

